ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದರೆ ಇದನ್ನು ಸರಿಪಡಿಸಲು ಸರ್ಕಾರ ಏನು ಕ್ರಮ ತೆಗೆದುಕೊಳ್ಳುವುದು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ವಾರ್ಷಿಕ ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರೂ.50,000 ಮೌಲ್ಯದ ಔಷಧಿ ಸರಬರಾಜು ಮಾಡಲಾಗುವುದು. 20,000 ರೂ. ಮೌಲ್ಯದ ಔಷಧಿಗಳನ್ನು ಸರ್ಕಾರ ಔಷಧಿ ಮಳಿಗೆಯಿಂದ ಹಾಗೂ 30,000 ರೂ. ಮೌಲ್ಯದ ಔಷಧಿಗಳನ್ನು ಜಿಲ್ಲಾ ಪಂಚಾಯತಿ ವತಿಯಿಂದ ಸರಬರಾಜು ಮಾಡಲಾಗುವುದು.

ಆ) ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ವಿಷಯ: ಖಾಲಿ ಇರತಕ್ಕ ದೈಹಿಕ ಶಿಕ್ಷಕರ ಹುದ್ದೆಗಳ ಭರ್ತಿ.

2492 (3599)

ಶ್ರೀ ಎ.ರುಕ್ಮಯ್ಯ ಪೂಜಾರಿ (ಪುತ್ತೂರು): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳೆಷ್ಟು?

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಜಿ.ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 110 ಹಾಗೂ ಸರ್ಕಾರಿ ಪ್ರೌಢಶಾಲೆಗಳಲ್ಲಿ 83 ಹುದ್ದೆಗಳು ಖಾಲಿ ಇದೆ.

ಆ) ಮುಂದಿನ ನೇಮಕಾತಿಯಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮ ತೆಗೆಮಕೊಳ್ಳಲಾಗುವುದು.

ವಿಷಯ: ರಾಜ್ಯದಲ್ಲಿರುವ ಯುನಾನಿ ಕಾಲೇಜುಗಳು.

2493 (3164)